(ಕಂದಾಯ ಇಲಾಖೆ)

# ಸಹಾಯಕ ಆಯುಕ್ತರವರ ನ್ಯಾಯಾಲಯ, ಹೊಸಪೇಟೆ

ಎ.ಎಲೇ.ನಂ.ಕಂ.ಪಹಣಿ.ಅಪೀಲು:126/2013-14 ದಿನಾಂಕ:08.09.2016.

**ಉಪಸ್ಥಿತರು: ಡಾ. ಅವಿನಾಶ್ ಮೆನನ್ ರಾಜೇಂದ್ರನ್, ಭಾ.ಆ.ಸೇ**
**ಸಹಾಯಕ ಆಯುಕ್ತರು, ಹೊಸಪೇಟೆ**

**ವಾದಿಗಳು: ಶ್ರೀ/ ಶ್ರೀಮತಿ**

1. ವಣೆನೂರು ಜಯರಾಮಪ್ಪ ತಂದೆ ದಿ. ವಣೆನೂರು ಅಂಜಿನಪ್ಪ
   **ವಾಸ:** ಚಿಕ್ಕಜಾಯಿಗನೂರು ಗ್ರಾಮ, ಹೊಸಪೇಟೆ ತಾಲೂಕು, ಬಳ್ಳಾರಿ ಜಿಲ್ಲೆ.

**[ಶ್ರೀ ಎಂ.ಕಾಳಿದಾಸ, ವಕೀಲರು, ಹೊಸಪೇಟೆ]**

**ಪ್ರತಿವಾದಿಗಳು: ಶ್ರೀ/ ಶ್ರೀಮತಿ**

1. ಹೆಚ್.ಹುಲಿಗೆಮ್ಮ ಗಂಡ ಲೇಟ್ ತಲಾರಿ ಗಂಗಪ್ಪ
   **ವಾಸ:** ಚಿಕ್ಕಜಾಯಿಗನೂರು ಗ್ರಾಮ, ಹೊಸಪೇಟೆ ತಾಲೂಕು, ಬಳ್ಳಾರಿ ಜಿಲ್ಲೆ.
2. ತಹಶೀಲ್ದಾರರು, ಹೊಸಪೇಟೆ.

********

**ವ್ಯಾಜ್ಯದ ಜಮೀನು:**

| ತಾಲೂಕು | ಹೋಬಳಿ | ಗ್ರಾಮ | ಸ.ನಂ. | ವಿಸ್ತೀರ್ಣ |
|---|---|---|---|---|
| ಹೊಸಪೇಟೆ | ಕಂಪ್ಲಿ | ಚಿಕ್ಕಜಾಯಿಗನೂರು | 113/ಸಿ3 | 04 ಎಕರೆ 75 ಸೆಂಟ್ಸ್ |

**ಪೀಠಿಕೆ:**

ಹೊಸಪೇಟೆ ತಾಲೂಕು ಕಂಪ್ಲಿ ಹೋಬಳಿ ಚಿಕ್ಕಜಾಯಿಗನೂರು ಗ್ರಾಮದ ಸ.ನಂ.113/ಸಿ3 ವಿಸ್ತೀರ್ಣ: 04 ಎಕರೆ 75 ಸೆಂಟ್ಸ್; ವಿವಾದಾಸ್ಪದ ಜಮೀನಿಗೆ ಸಂಬಂಧಿಸಿದಂತೆ ಕಂದಾಯ ನಿರೀಕ್ಷಕರು, ಕಂಪ್ಲಿ ಇವರ ಹಕ್ಕು ಬದಲಾವಣೆ ಆದೇಶ ಸಂಖ್ಯೆ:ಹೆಚ್.6/2012-13 ದಿನಾಂಕ:11.10.2012 ವನ್ನು ಪ್ರಶ್ನಿಸಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136[2] ರಡಿಯಲ್ಲಿ ಮೇಲ್ಮನವಿಯನ್ನು ವಾದಿಪರ ವಕೀಲರು ದಿನಾಂಕ:10.07.2014 ರಂದು ಸಲ್ಲಿಸಿರುತ್ತಾರೆ.

ವಾದಿಗಳ ಪರ ವಕೀಲರು ಸಲ್ಲಿಸಿದ ದಾಖಲೆಗಳನ್ನು ಪರಿಶೀಲಿಸಿ, ಸದರಿ ಪ್ರಶ್ನಿತ ಆದೇಶಕ್ಕೆ ಮುಂದಿನ ವಿಚಾರಣೆ ದಿನಾಂಕದವರೆಗೆ ಮಾತ್ರ ತಡೆಯಾಜ್ಞೆಯನ್ನು ನೀಡಿ, ನೈಸರ್ಗಿಕ ನ್ಯಾಯದ ಹಿತದೃಷ್ಟಿಯಿಂದ ಪ್ರಕರಣದ ವಿಚಾರಣೆಯನ್ನು ದಿನಾಂಕ:08.10.2013 ಕ್ಕೆ ನಿಗಧಿಪಡಿಸಿ ಉಭಯಪಕ್ಷಗಳಿಗೆ ನೋಟೀಸು ಮೂಲಕ ತಿಳಿಸಿ ವಿಚಾರಣೆಯನ್ನು ಪ್ರಾರಂಭಿಸಲಾಯಿತು.

ಆದರೆ, ವಿಚಾರಣೆ ಪ್ರಾರಂಭಿಸಿದಾಗಿನಿಂದ ಉಭಯ ಪಕ್ಷಗಾರರು ಸತತವಾಗಿ ಗೈರುಹಾಜರಾಗಿದ್ದು, ಪ್ರಕರಣದಲ್ಲಿ ಆಸಕ್ತಿ ಇಲ್ಲದೇ ಇರುವುದು ಕಂಡುಬಂದಿರುತ್ತದೆ. ಹಾಗೂ ತಮ್ಮ ಅಪೀಲನ್ನು ಸಾಬೀತುಪಡಿಸಿಕೊಳ್ಳಲು ಪೂರಕವಾದ ಯಾವುದೇ ದಾಖಲೆಗಳನ್ನು ಸಹ ಸಲ್ಲಿಸಿರುವುದಿಲ್ಲ. ಆದುದರಿಂದ, ಪ್ರಕರಣವನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಲು ಈ ಕೆಳಕಂಡಂತೆ

## -:ಆದೇಶ:-

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಉಭಯ ಪಕ್ಷಗಾರರು ಸತತವಾಗಿ ಗೈರುಹಾಜರಾಗಿರುವುದರಿಂದ, ಸದರಿ ಅಪೀಲನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಲಾಗಿದೆ. (dismissed for default).

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:08.09.2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಿದೆ.

**[ಡಾ. ಅವಿನಾಶ್ ಮೆನನ್ ರಾಜೇಂದ್ರನ್, ಭಾ.ಆ.ಸೇ]**
**ಸಹಾಯಕ ಆಯುಕ್ತರು,**
**ಹೊಸಪೇಟೆ.**

ವಾದಿ : ಪ್ರತಿವಾದಿಗಳಿಗೆ

**ಪ್ರತಿಯನ್ನು:** ತಹಶೀಲ್ದಾರರು, ಹೊಸಪೇಟೆ ಇವರಿಗೆ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ.